**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿ/ಸಿಬ್ಬಂದಿ-3/ಸಿಸಿ-02/ಹೆವೇಬ/2015-16

ನಿರ್ದೇಶಕರ ಕಛೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ
ಮಲ್ಲೇಶ್ವರ, 18ನೇ ಅಡ್ಡರಸ್ತೆ,
ಬೆಂಗಳೂರು- 560012
ದಿನಾಂಕ: 17-11-2018.

## ಸುತ್ತೋಲೆ

ವಿಷಯ:- ಸೇವೆಯಲ್ಲಿ ಒಂದೂ ಪದೋನ್ನತಿ ಇಲ್ಲದೆ 25 ಮತ್ತು 30 ವರ್ಷಗಳು ಅದೇ ಹುದ್ದೆಯಲ್ಲಿ ಮುಂದುವರಿದಿರುವ ಪದವಿ ಪೂರ್ವ ಶಿಕ್ಷಣ ಉಪನ್ಯಾಸಕರಿಗೆ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ

ಉಲ್ಲೇಖ:-
1. ಈ ಕಛೇರಿ ಸಮಾಂಕಿತ ಪತ್ರ ದಿನಾಂಕ:01-06-2017 ಮತ್ತು 28-06-2018
2. ಸರ್ಕಾರದ ಪತ್ರ ಸಂಖ್ಯೆ: ಇಡಿ 122 ಡಿಜಿಡಿ 2017 ದಿನಾಂಕ 10-10-2018.

*%*%*

ಸರ್ಕಾರದ ಆದೇಶದ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (VII) ಬೆಂಗಳೂರು, ದಿನಾಂಕ 14ನೇ ಜೂನ್ 2012 ರಲ್ಲಿ ರಾಜ್ಯ ವೇತನ ಶ್ರೇಣಿಗಳಲ್ಲಿನ ಮೊದಲ 15 ಶ್ರೇಣಿಗಳಲ್ಲಿರುವ ಯಾವುದೇ ಒಂದು ಹುದ್ದೆಯಲ್ಲಿ 25 ಮತ್ತು 30 ವರ್ಷಗಳ ಕಾಲ ಒಂದೂ ಪದೋನ್ನತಿ ಇಲ್ಲದೇ ಸೇವೆಯಲ್ಲಿ ಮುಂದುವರಿದಿರುವ ಅಥವಾ ಮುಂದುವರಿಯುವ ಸರ್ಕಾರಿ ನೌಕರನಿಗೆ ಆ ಹುದ್ದೆಗೆ ನಿಗದಿಪಡಿಸಲಾದ ವೇತನ ಶ್ರೇಣಿಯಲ್ಲಿ ಅಥವಾ ಅವನು ಹೊಂದಿರುವ ಆಯ್ಕೆಕಾಲಿಕ ವೇತನ ಶ್ರೇಣಿಯಲ್ಲಿ ಅಥವಾ ಹಿರಿಯ ವೇತನ ಶ್ರೇಣಿಯಲ್ಲಿ ಆಯಾ ಪ್ರಕರಣದನ್ವಯ, 25 ವರ್ಷಗಳ ಸೇವೆಗೆ 02ನೇ ಹೆಚ್ಚುವರಿ ವೇತನ ಬಡ್ತಿಯನ್ನು ಮತ್ತು 30 ವರ್ಷಗಳ ಸೇವೆಗೆ 3ನೇ ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ 01-04-2012 ರಿಂದ ಜಾರಿಗೆ ಬರುವಂತೆ ಅಥವಾ 25 ಮತ್ತು 30 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿದ ದಿನಾಂಕದಿಂದ ಇದರಲ್ಲಿ ಯಾವುದು ನಂತರವೋ, ಆ ದಿನಾಂಕದಿಂದ ಮಂಜೂರು ಮಾಡಲು ಸರ್ಕಾರವು ಅವಕಾಶ ಕಲ್ಪಿಸಿದೆ.

ನಂತರದ ಸರ್ಕಾರದ ನೀತಿಯಂತೆ ಸರ್ಕಾರವು ತನ್ನ ಆದೇಶ ಸಂಖ್ಯೆ: ಇಡಿ 100 ಎಸ್‌ಟಿಬಿ 2012, ಬೆಂಗಳೂರು, ದಿನಾಂಕ 11-09-2012 ರಲ್ಲಿ ಮೇಲಿನ ಸೌಲಭ್ಯವನ್ನು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಬೋಧಕ ಮತ್ತು ಬೋಧಕೇತರ ನೌಕರರಿಗೂ ವಿಸ್ತರಿಸಿರುವುದನ್ನು ಸರ್ಕಾರದ ಅವಗಾಹನೆಗೆ

ತಂದು ಈ ಬಗ್ಗೆ ಉಲ್ಲೇಖ(1)ರಲ್ಲಿ ಸೂಕ್ತ ಮಾರ್ಗದರ್ಶನ ಕೋರಲಾಗಿತ್ತು. ಸರ್ಕಾರವು ಉಲ್ಲೇಖಿತ-2ರ ಪತ್ರದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರಿಗೆ 20 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿದಲ್ಲಿ ಪ್ರಾಂಶುಪಾಲರ ವೇತನ ಶ್ರೇಣಿಗೆ ಸಮಾನವಾದ ವೇತನ ಶ್ರೇಣಿ ರೂ 30400-53100 ಶ್ರೇಣಿಯಲ್ಲಿ ಒಂದು ವೇತನ ಬಡ್ತಿಯನ್ನು ನೀಡಲಾಗುತ್ತಿದೆ.

ಸದರಿ ವೇತನ ಶ್ರೇಣಿಯು ಕರ್ನಾಟಕ ನಾಗರಿಕ ಸೇವಾ ಪರಿಷ್ಕೃತ ವೇತನ ನಿಯಮ 2012 ರಲ್ಲಿನ 17 ನೇ ವೇತನ ಶ್ರೇಣಿಯಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 30 ಎಸ್‌ಆರ್‌ಪಿ 2012 ದಿನಾಂಕ: 30-01-2014 ರನ್ವಯ 16 ರಿಂದ 18ನೇ ವೇತನ ಶ್ರೇಣಿಗಳಲ್ಲಿ ಯಾವುದೇ ಒಂದು ಹುದ್ದೆಯಲ್ಲಿ ದೀರ್ಘಕಾಲ ಒಂದೂ ಪದೋನ್ನತಿ ಇಲ್ಲದೆ, ಸೇವೆಯಲ್ಲಿ ಮುಂದುವರಿದಿರುವ ನೌಕರರಿಗೆ 1, 2 ಮತ್ತು 3ನೇ ವೇತನ ಬಡ್ತಿ ಸೌಲಭ್ಯವನ್ನು ವಿಸ್ತರಿಸಲಾಗಿರುವುದರಿಂದ ಒಂದೇ ಹುದ್ದೆಯಲ್ಲಿ 25 ಮತ್ತು 30 ವರ್ಷ ಸೇವೆಯಲ್ಲಿ ಒಂದೂ ಪದೋನ್ನತಿ ಇಲ್ಲದೆ ಸೇವೆ ಸಲ್ಲಿಸಿದ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ 1, 2 ಮತ್ತು 3ನೇ ವೇತನ ಬಡ್ತಿಯ ಸೌಲಭ್ಯವನ್ನು ನಿಯಮಗಳಲ್ಲಿನ ಅವಕಾಶದನ್ವಯ ನೀಡಬಹುದಾಗಿದೆ ಎಂದು ನಿರ್ದೇಶಿಸಿದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖ-2ರ ಸರ್ಕಾರದ ನಿರ್ದೇಶನದಂತೆ ಪದವಿ ಪೂರ್ವ ಕಾಲೇಜಿನ ಬೋಧಕ ಹುದ್ದೆಗೆ ಸಂಬಂಧಿಸಿದಂತೆ ನಿಗಧಿಪಡಿಸಿರುವ ಚೆಕ್‌ಲಿಸ್ಟ್‌ನಲ್ಲಿ 25 ಮತ್ತು 30 ವರ್ಷಗಳ ಸೇವೆ ಸಲ್ಲಿಸಿರುವ ಬೋಧಕ ಸಿಬ್ಬಂದಿಗಳ ಮಾಹಿತಿಯನ್ನು ನಮೂದಿಸಿ ಸಂಸ್ಥೆಯ ಅಧ್ಯಕ್ಷರು/ ಕಾರ್ಯದರ್ಶಿಗಳು ಹಾಗೂ ಪ್ರಾಚಾರ್ಯರಿಂದ ದೃಢೀಕರಿಸಿ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರ ಮುಖಾಂತರ ನಿಯಮಾನುಸಾರ ಅರ್ಹ ಸೂಕ್ತ ಪ್ರಸ್ತಾವನೆಯನ್ನು ಮಾತ್ರ ಸಲ್ಲಿಸುವುದು.

ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು, ಆಡಳಿತ ಮಂಡಳಿಯವರು / ಪ್ರಾಂಶುಪಾಲರು ಸಲ್ಲಿಸುವ ಪ್ರಸ್ತಾವನೆಯನ್ನು ಮೂಲ ದಾಖಲೆಗಳೊಂದಿಗೆ ನಿಯಮಾನುಸಾರ ಪರಿಶೀಲಿಸಿ ದೃಢೀಕರಿಸಿ ಅರ್ಹ ಪ್ರಸ್ತಾವನೆಗಳನ್ನು ಮಾತ್ರ ಮಂಜೂರಾತಿ / ಅನುಮೋದನೆಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಈ ಮೂಲಕ ನಿರ್ದೇಶಿಸಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:-

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಅಗತ್ಯಕ್ರಮಕ್ಕಾಗಿ.
2. ಪದವಿ ಪೂರ್ವ ಶಿಕ್ಷಣ ಬೋಧಿಸುತ್ತಿರುವ ರಾಜ್ಯದ ಎಲ್ಲಾ ಪ್ರಾಂಶುಪಾಲರುಗಳಿಗೆ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರ ಮುಖಾಂತರ.
3. ಇ- ತಂತ್ರಾಂಶ ಶಾಖೆ, ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲು ಸೂಚಿಸಿದೆ. 4. ಕಛೇರಿ / ಹೆಚ್ಚುವರಿ